**All India Radio: Bangalore**
**National Bulletin In Kannada**
**12.08.2026 1.10 p.m.**

ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು

**12.08.2026 1.10 p.m.**
**<><><><>**

ಮುಖ್ಯಾಂಶಗಳು

1. ಸಂಸತ್ತಿನಲ್ಲಿ ವಿಪಕ್ಷಗಳಿಂದ ಮುಂದುವರಿದ ಗದ್ದಲ- ಉಭಯ ಸದನಗಳ ಕಲಾಪ ಮಧ್ಯಾಹ್ನ ೨ ಗಂಟೆಗೆ ಮುಂದೂಡಿಕೆ
2. ಪ್ರತಿಪಕ್ಷಗಳ ಎಲ್ಲ ಪ್ರಶ್ನೆಗಳಿಗೆ ಉತ್ತರಿಸಲು ಸಿದ್ಧ - ಕೇಂದ್ರ ಗೃಹ ಸಚಿವ ಅಮಿತ್ ಶಾ
3. ರಾಷ್ಟ್ರದ ಅಸ್ಮಿತೆಯನ್ನು ಬಲಪಡಿಸುವಲ್ಲಿ ರಾಷ್ಟ್ರೀಯ ಗೀತೆ 'ವಂದೇ ಮಾತರಂ' ಪ್ರಮುಖ ಪಾತ್ರ - ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್
4. ಕೈಮಗ್ಗ ಕ್ಷೇತ್ರದಲ್ಲಿ ನಾವೀನ್ಯತೆ, ಆಧುನಿಕ ತಂತ್ರಜ್ಞಾನಕ್ಕೆ ಆದ್ಯತೆ ನೀಡುವಂತೆ ಕೇಂದ್ರ ಸಚಿವ ಗಿರಿರಾಜ್ ಸಿಂಗ್ ಕರೆ
5. ಸಿಂಕ್ ಫೀಲ್ಡ್ ಕಪ್ ಚೆಸ್ ಟೂರ್ನಿ: ಉಜ್ಬೇಕಿಸ್ತಾನದ ಸಿಂದರೊವ್ ವಿರುದ್ಧ ಭಾರತದ ಗ್ರ್ಯಾಂಡ್ ಮಾಸ್ಟರ್ ಆರ್.ಪ್ರಜ್ಞಾನಂದಾಗೆ ಗೆಲುವು

<><><><>

ಸಂಸತ್ತಿನ ಉಭಯ ಸದನಗಳಲ್ಲಿ ಇಂದು ಕೂಡ ವಿಪಕ್ಷಗಳ ತೀವ್ರ ಗದ್ದಲ ಹಾಗೂ ಮಾತಿನ ಚಕಮಕಿ ನಡೆದಿದ್ದು, ಕಲಾಪಗಳನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಗಿದೆ. ನೀಟ್ ಪ್ರತಿಭಟನಾಕಾರರ ಮೇಲಿನ ಪೊಲೀಸ್ ಕ್ರಮದ ಕುರಿತು ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರು ಸದನಕ್ಕೆ ಆಗಮಿಸಿ ಸ್ಪಷ್ಟನೆ ನೀಡಬೇಕೆಂದು ಆಗ್ರಹಿಸಿ ಲೋಕಸಭೆಯಲ್ಲಿ ವಿಪಕ್ಷಗಳ ಸಂಸದರು ನಿರಂತರ ಘೋಷಣೆ ಕೂಗಿದರು. ಗೃಹ ಸಚಿವರು ವಿಸ್ತೃತ ಚರ್ಚೆಗೆ ಸಿದ್ಧರಿದ್ದಾರೆ ಎಂದು ಸರ್ಕಾರ ತಿಳಿಸಿದರೂ ಗದ್ದಲ ಶಮನವಾಗದ ಹಿನ್ನೆಲೆಯಲ್ಲಿ ಲೋಕಸಭಾಧ್ಯಕ್ಷ ಓಂ ಬಿರ್ಲಾ ಕಲಾಪವನ್ನು ಮಧ್ಯಾಹ್ನಕ್ಕೆ ಮುಂದೂಡಿದರು. ಇದಕ್ಕೂ ಮುನ್ನ ಲೋಕಸಭೆಯಲ್ಲಿ 'ರಾಷ್ಟ್ರೀಯ ಸಹಕಾರ ಅಭಿವೃದ್ಧಿ ನಿಗಮ ತಿದ್ದುಪಡಿ ವಿಧೇಯಕ-೨೦೨೬' ಹಾಗೂ ಕೇರಳ ರಾಜ್ಯದ ಹೆಸರನ್ನು 'ಕೇರಳಂ' ಎಂದು ಬದಲಾಯಿಸುವ ವಿಧೇಯಕಗಳನ್ನು ಧ್ವನಿಮತದ ಮೂಲಕ ಅಂಗೀಕರಿಸಲಾಯಿತು. ಮತ್ತೊಂದೆಡೆ,

ರಾಜ್ಯಸಭೆಯಲ್ಲಿ ಸಿಪಿಐ-ಎಂ ಸಂಸದ ಜಾನ್ ಬ್ರಿಟ್ಟಾಸ್ ಅವರ ವಿರುದ್ಧ ಮಹಿಳಾ ಸದಸ್ಯೆಯೊಬ್ಬರು ನೀಡಿದ್ದಾರೆನ್ನಲಾದ ಆಕ್ಷೇಪಾರ್ಹ ಹೇಳಿಕೆ ಭಾರಿ ಗದ್ದಲಕ್ಕೆ ಕಾರಣವಾಯಿತು. ಈ ಮಾತು ತಮ್ಮ ಸಂಸ್ಕೃತಿಗೆ ಎಸಗಿದ ಅಪಮಾನ ಎಂದು ಬ್ರಿಟ್ಟಾಸ್ ಕಳವಳ ವ್ಯಕ್ತಪಡಿಸಿದರು. ಪ್ರತಿಯೊಬ್ಬ ಸದಸ್ಯರ ಸಂಸ್ಕೃತಿ ಮತ್ತು ಗೌರವವನ್ನು ಕಾಯ್ದುಕೊಳ್ಳುವುದು ಮುಖ್ಯವಾಗಿದ್ದು, ಆಕ್ಷೇಪಾರ್ಹ ಹೇಳಿಕೆ ಕುರಿತು ಚರ್ಚಿಸಲು ಸಂಬಂಧಪಟ್ಟವರನ್ನು ತಮ್ಮ ಕೊಠಡಿಗೆ ಕರೆಯಿಸುವುದಾಗಿ ಸಭಾಪತಿ ಸಿ.ಪಿ.ರಾಧಾಕೃಷ್ಣನ್ ತಿಳಿಸಿದರು. ಆದರೂ ಎರಡೂ ಕಡೆಗಳಿಂದ ಗದ್ದಲ ಮುಂದುವರಿದಿದ್ದರಿಂದ ರಾಜ್ಯಸಭೆ ಕಲಾಪವನ್ನು ಮಧ್ಯಾಹ್ನ ೨ ಗಂಟೆಯವರೆಗೆ ಮುಂದೂಡಲಾಯಿತು. ಕಲಾಪ ಮುಂದೂಡಿಕೆಗೂ ಮುನ್ನ ಶಿಕ್ಷಣ, ಹಣಕಾಸು ಹಾಗೂ ರೈಲ್ವೆ ಸೇರಿದಂತೆ ವಿವಿಧ ಸಚಿವಾಲಯಗಳ ಪ್ರಮುಖ ವರದಿಗಳು ಮತ್ತು ಸಿಎಜಿ ವರದಿಗಳನ್ನು ಸದನದ ಮುಂದಿಡಲಾಯಿತು.

<><><><>

ವಿದ್ಯಾರ್ಥಿಗಳ ಸಮಸ್ಯೆ ಸೇರಿದಂತೆ ಯಾವುದೇ ವಿಷಯದ ಕುರಿತು ಚರ್ಚೆ ನಡೆಸಲು ಹಾಗೂ ಸಂಸತ್ ಸದಸ್ಯರು ಎತ್ತುವ ಎಲ್ಲ ಪ್ರಶ್ನೆಗಳಿಗೆ ಉತ್ತರಿಸಲು ಕೇಂದ್ರ ಸರ್ಕಾರ ಸಂಪೂರ್ಣ ಸಿದ್ಧವಿದೆ ಎಂದು ಕೇಂದ್ರ ಗೃಹ ಸಚಿವ ಅಮಿತ್ ಶಾ ಹೇಳಿದ್ದಾರೆ. ಸಂಸತ್ ಆವರಣದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ಸರ್ಕಾರ ಎಲ್ಲ ವಿಷಯಗಳ ಕುರಿತು ಚರ್ಚೆಗೆ ಸಿದ್ಧವಾಗಿದೆ. ಈ ವಿಷಯದ ಕುರಿತು ಚರ್ಚೆ ನಡೆಸಲು ಪ್ರತಿಪಕ್ಷಗಳು ಮಧ್ಯಾಹ್ನ ೨ ಗಂಟೆಯೊಳಗೆ ಸಭಾಧ್ಯಕ್ಷರಿಗೆ ನೋಟಿಸ್ ಸಲ್ಲಿಸಬಹುದು. ಇದರಿಂದ ಇಂದು ಮಧ್ಯಾಹ್ನ ೩ ಗಂಟೆಗೆ ಚರ್ಚೆ ಆರಂಭಿಸಬಹುದು ಎಂದು ಹೇಳಿದ್ದಾರೆ. ಚರ್ಚೆ ಆರಂಭವಾದರೆ ತಾವು ಸದನದಲ್ಲೇ ಕುಳಿತು ಪ್ರತಿಯೊಬ್ಬ ಸದಸ್ಯರ ಮಾತನ್ನೂ ಆಲಿಸುವುದಾಗಿ ತಿಳಿಸಿದ ಅವರು, ಚರ್ಚೆ ಪೂರ್ಣಗೊಂಡ ಬಳಿಕ ನಾಳೆ ಮಧ್ಯಾಹ್ನ ೩ ಗಂಟೆಗೆ ಚರ್ಚೆಗೆ ಉತ್ತರಿಸಲು ಸಿದ್ಧವಿರುವುದಾಗಿ ತಿಳಿಸಿದ್ದಾರೆ. ಪ್ರತಿಪಕ್ಷಗಳು ಸದನದ ಕಲಾಪ ನಡೆಯಲು ಅವಕಾಶ ನೀಡುತ್ತಿಲ್ಲ ಎಂದು ಆರೋಪಿಸಿದ ಸಚಿವರು, ಇಂತಹ ಗಂಭೀರ ವಿಷಯದ ಕುರಿತು ಸಂಸದೀಯ ನಿಯಮಾವಳಿಗಳ ಪ್ರಕಾರ ಚರ್ಚೆ ನಡೆಯಬೇಕು ಎಂದು ತಿಳಿಸಿದರು.

<><><><>

ವಂದೇ ಮಾತರಂ ಗೀತೆ ಭಾರತದ ಸ್ವಾತಂತ್ರ್ಯ ಸಂಗ್ರಾಮಕ್ಕೆ ಪ್ರೇರಣೆಯಾಗಿದ್ದಲ್ಲದೆ, ಇಂದಿಗೂ ರಾಷ್ಟ್ರದ ಅಸ್ಮಿತೆಯನ್ನು ಬಲಪಡಿಸುತ್ತಿದೆ ಎಂದು ಉಪರಾಷ್ಟ್ರಪತಿ ಸಿ.ಪಿ.ರಾಧಾಕೃಷ್ಣನ್ ಹೇಳಿದ್ದಾರೆ. ರಾಷ್ಟ್ರೀಯ ಗೀತೆಗೆ ೧೫೦ ವರ್ಷ ತುಂಬಿದ ನೆನಪಿನಲ್ಲಿ ಸಂಸ್ಕೃತಿ ಸಚಿವಾಲಯವು ಆಯೋಜಿಸಿದ್ದ

'ಹರ್ ಘರ್ ತಿರಂಗಾ' ಬೈಕ್ ರ್‍ಯಾಲಿಗೆ ದೆಹಲಿಯಲ್ಲಿ ಸಂಸತ್ ಸದಸ್ಯರೊಂದಿಗೆ ಹಸಿರು ನಿಶಾನೆ ತೋರಿ ಮಾತನಾಡಿದ ಅವರು, ವಂದೇ ಮಾತರಂ ಗೀತೆ ದೇಶಭಕ್ತಿಯನ್ನು ಜಾಗೃತಗೊಳಿಸಿ, ಬ್ರಿಟಿಷ್ ಆಡಳಿತದ ವಿರುದ್ಧದ ಹೋರಾಟದಲ್ಲಿ ವಿಭಿನ್ನ ಪ್ರದೇಶ, ಭಾಷೆ ಮತ್ತು ಧರ್ಮಗಳ ಜನರನ್ನು ಒಂದಾಗಿ ಬೆಸೆದಿತ್ತು ಎಂದು ಸ್ಮರಿಸಿದರು. ಇದೇ ವೇಳೆ 'ಹರ್ ಘರ್ ತಿರಂಗಾ' ಅಭಿಯಾನವನ್ನು ಜನಪರ ಚಳವಳಿ ಎಂದು ಬಣ್ಣಿಸಿದ ಅವರು, ಪ್ರತಿಯೊಬ್ಬ ನಾಗರಿಕನೂ ಹೆಮ್ಮೆಯಿಂದ ತ್ರಿವರ್ಣ ಧ್ವಜವನ್ನು ಹಾರಿಸುವ ಮೂಲಕ ದೇಶದ ಏಕತೆ ಹಾಗೂ ಸೇವಾ ಮನೋಭಾವವನ್ನು ಎತ್ತಿಹಿಡಿಯಬೇಕು ಎಂದು ಕರೆ ನೀಡಿದರು.

<><><>

ಮೇಜರ್ ಧ್ಯಾನ್‌ಚಂದ್ ಕ್ರೀಡಾಂಗಣದಲ್ಲಿ ಇಂದು ಬೆಳಗ್ಗೆ ಯುವ ವ್ಯವಹಾರಗಳು ಮತ್ತು ಕ್ರೀಡಾ ಸಚಿವ ಡಾ.ಮನ್ಸುಖ್ ಮಾಂಡವಿಯಾ 'ಹರ್ ಘರ್ ತಿರಂಗಾ ಸೈಕಲ್ ಯಾತ್ರೆ'ಗೆ ಚಾಲನೆ ನೀಡಿದರು. ದೆಹಲಿ ವಿಶ್ವವಿದ್ಯಾಲಯದ ಮೈಭಾರತ್ ಸ್ವಯಂಸೇವಕರೊಂದಿಗೆ ಸಚಿವರು ಯಾತ್ರೆಯ ನೇತೃತ್ವ ವಹಿಸಿದರು. ಮಾಧ್ಯಮಗಳೊಂದಿಗೆ ಮಾತನಾಡಿದ ಡಾ. ಮನ್ಸುಖ್ ಮಾಂಡವಿಯಾ, ಯಾತ್ರೆಯಲ್ಲಿ ಒಂದು ಸಾವಿರಕ್ಕೂ ಅಧಿಕ ಮೈಭಾರತ್ ಸ್ವಯಂಸೇವಕರು ಪಾಲ್ಗೊಂಡು ದೇಶಕ್ಕೆ ದೈಹಿಕ ಕ್ಷಮತೆಯ ಸಂದೇಶ ಸಾರಿದ್ದಾರೆ ಎಂದರು. ಅಭಿವೃದ್ಧಿ ಹೊಂದಿದ ರಾಷ್ಟ್ರ ನಿರ್ಮಾಣದಲ್ಲಿ ಸೈಕ್ಲಿಂಗ್‌ನ ಮಹತ್ವವನ್ನು ಒತ್ತಿ ಹೇಳಿದ ಅವರು, ಮಾಲಿನ್ಯ ಮತ್ತು ಸಂಚಾರ ದಟ್ಟಣೆಗೆ ಸೈಕ್ಲಿಂಗ್ ಪರಿಹಾರವಾಗಿದೆ ಎಂದು ತಿಳಿಸಿದರು.

<><><>

ಕೈಮಗ್ಗ ಕ್ಷೇತ್ರಕ್ಕೆ ಹೊಸ ಚೈತನ್ಯ ತುಂಬಲು ನಾವೀನ್ಯತೆ, ಮಾರುಕಟ್ಟೆ ಆಧಾರಿತ ವಿನ್ಯಾಸ ಹಾಗೂ ಆಧುನಿಕ ತಂತ್ರಜ್ಞಾನಕ್ಕೆ ಆದ್ಯತೆ ನೀಡಬೇಕೆಂದು ಕೇಂದ್ರ ಜವಳಿ ಸಚಿವ ಗಿರಿರಾಜ್ ಸಿಂಗ್ ಕರೆ ನೀಡಿದ್ದಾರೆ. ನವದೆಹಲಿಯಲ್ಲಿ ನಡೆದ 'ಸೂತ್ರ-೨೦೨೫' ಸಮಾವೇಶದಲ್ಲಿ ಮಾತನಾಡಿದ ಅವರು, ಕೈಮಗ್ಗ ಉತ್ಪನ್ನಗಳನ್ನು ಜಿಐ ಟ್ಯಾಗ್ ಹೊಂದಿರುವ ಉನ್ನತ ಮೌಲ್ಯದ ಉತ್ಪನ್ನಗಳಾಗಿ ಬೆಳೆಸಬೇಕು ಹಾಗೂ ವಿದ್ಯಾರ್ಥಿಗಳು ಉದ್ಯೋಗದಾತರಾಗಲು ಶ್ರಮಿಸಬೇಕು ಎಂದರು. ಇದೇ ವೇಳೆ ಕೈಮಗ್ಗ ಕ್ಷೇತ್ರದಲ್ಲಿ ಸಂಶೋಧನೆ, ಉದ್ಯಮಶೀಲತೆ ಮತ್ತು ತರಬೇತಿಯನ್ನು ಉತ್ತೇಜಿಸಲು ಗ್ರಾಸಿಮ್ ಇಂಡಸ್ಟ್ರೀಸ್, ಐಐಎಂ ಸಂಬಲ್‌ಪುರ ಹಾಗೂ ನಿಟ್ರಾ ಸಂಸ್ಥೆಗಳೊಂದಿಗೆ ಪ್ರಮುಖ ತಿಳಿವಳಿಕಾ ಒಪ್ಪಂದಗಳಿಗೆ ಸಹಿ ಹಾಕಲಾಯಿತು.

<><><>

ಮಾಜಿ ರಾಷ್ಟ್ರಪತಿ ರಾಮನಾಥ್ ಕೋವಿಂದ್ ಅವರ “ಟ್ರಯಂಫ್ ಆಫ್ ದಿ ಇಂಡಿಯನ್ ರಿಪಬ್ಲಿಕ್: ಮೈ ಲೈಫ್, ಮೈ ಸ್ಟ್ರಗಲ್ಸ್” ಎಂಬ ಶೀರ್ಷಿಕೆಯ ಆತ್ಮಕಥೆಯನ್ನು ಪ್ರಧಾನಮಂತ್ರಿ ನರೇಂದ್ರ ಮೋದಿ ಇಂದು ನವದೆಹಲಿಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಬಿಡುಗಡೆ ಮಾಡಿದರು. ಈ ಪುಸ್ತಕವು ರಾಮನಾಥ್ ಕೋವಿಂದ್ ಅವರ ಬಾಲ್ಯದ ದಿನಗಳು, ಸವಾಲುಗಳು ಹಾಗೂ ಭಾರತದ ೧೪ನೇ ರಾಷ್ಟ್ರಪತಿಯಾಗಿ ಸಲ್ಲಿಸಿದ ಸೇವೆ ಒಳಗೊಂಡಂತೆ ಅವರ ಸುದೀರ್ಘ ಸಾರ್ವಜನಿಕ ಜೀವನಾನುಭವಗಳನ್ನು ತೆರೆದಿಡುತ್ತದೆ. ಕಾರ್ಯಕ್ರಮದಲ್ಲಿ ಮಾತನಾಡಿದ ಪ್ರಧಾನಿ, ರಾಮ್‌ನಾಥ್ ಕೋವಿಂದ್ ಅವರ ಮಾರ್ಗದರ್ಶನ ತಮಗೆ ದೊಡ್ಡ ಶಕ್ತಿಯಾಗಿತ್ತು ಎಂದರು. ಈ ಆತ್ಮಕಥನವು, ಭಾರತೀಯ ಪ್ರಜಾಪ್ರಭುತ್ವಕ್ಕೆ ಮಹತ್ವದ ಕೊಡುಗೆಯಾಗಿದ್ದು, ಯುವ ಪೀಳಿಗೆಯು ಅವರ ಜೀವನ ಪಯಣದಿಂದ ಪ್ರೇರಣೆ ಪಡೆಯಬೇಕು ಎಂದು ಕರೆ ನೀಡಿದರು. ಇದೇ ವೇಳೆ ಮಾತನಾಡಿದ ಮಾಜಿ ರಾಷ್ಟ್ರಪತಿ ರಾಮ್‌ನಾಥ್ ಕೋವಿಂದ್, ರಾಜಕೀಯ ಎಂಬುದು ಕೇವಲ ಅಧಿಕಾರ ಹಿಡಿಯುವ ಮಾರ್ಗವಲ್ಲ, ಬದಲಿಗೆ ದೇಶ ಸೇವೆಯ ಸಾಧನ. ಶಿಕ್ಷಣವು ಜೀವನದಲ್ಲಿ ಅಪಾರ ಅವಕಾಶಗಳನ್ನು ತೆರೆಯುತ್ತದೆ ಎಂದರು.

<><><>

ಕೇಂದ್ರ ಗೃಹ ಮತ್ತು ಸಹಕಾರ ಸಚಿವ ಅಮಿತ್ ಶಾ ಅವರು ಇಂದು ಸಂಜೆ ವಿಡಿಯೋ ಕಾನ್ಫರೆನ್ಸಿಂಗ್ ಮೂಲಕ ಗ್ರಾಮೀಣ ಜ್ಞಾನ ಸೇತು ಆಪ್ ಅನ್ನು ಉದ್ಘಾಟಿಸಲಿದ್ದಾರೆ. ಗುಜರಾತ್‌ನ ಗಾಂಧಿನಗರ ಲೋಕಸಭಾ ಕ್ಷೇತ್ರ ವ್ಯಾಪ್ತಿಯಲ್ಲಿರುವ ಗ್ರಂಥಾಲಯಗಳನ್ನು ಪರಸ್ಪರ ಸಂಪರ್ಕಿಸುವ ಉದ್ದೇಶದಿಂದ ಈ ಆಪ್ ಅನ್ನು ಅಭಿವೃದ್ಧಿಪಡಿಸಲಾಗಿದೆ.

<><><>

ಮುಂಬೈನ ಘಾಟ್‌ಕೋಪರ್ ಪ್ರದೇಶದ ವಸತಿ ಕಟ್ಟಡದ ಮೇಲೆ ಇಂದು ಮುಂಜಾನೆ ಸಂಭವಿಸಿದ ಭೀಕರ ಭೂಕುಸಿತದಲ್ಲಿ ಕನಿಷ್ಠ ಆರು ಜನರು ಮೃತಪಟ್ಟಿದ್ದು, ನಾಲ್ವರು ತೀವ್ರವಾಗಿ ಗಾಯಗೊಂಡಿದ್ದಾರೆ. ಬೃಹನ್ಮುಂಬೈ ಮಹಾನಗರ ಪಾಲಿಕೆ ಹಾಗೂ ಮುಂಬೈ ಅಗ್ನಿಶಾಮಕ ದಳ ನೀಡಿದ ಮಾಹಿತಿಯಂತೆ, ಘಾಟ್‌ಕೋಪರ್‌ನ ಚಿರಾಗ್ ನಗರದಲ್ಲಿರುವ ಗೌಸಿಯಾ ಚಾಲ್‌ನಲ್ಲಿ ಬೆಳಗಿನ ಜಾವ ಸುಮಾರು ೩:೪೮ ಕ್ಕೆ ಈ ದುರಂತ ಸಂಭವಿಸಿದೆ. ಗುಡ್ಡದ ಒಂದು ಭಾಗ ಕುಸಿದು ಎರಡ್ಮೂರು ಮನೆಗಳ ಮೇಲೆ ಬಿದ್ದಿದ್ದರಿಂದ ಅಪಾರ ಹಾನಿಯಾಗಿದೆ. ಘಟನಾ ಸ್ಥಳಕ್ಕೆ ಮುಂಬೈ

ಮೇಯರ್ ರಿತು ತಾವ್ಡೆ ಹಾಗೂ ಹೆಚ್ಚುವರಿ ಮಹಾನಗರ ಪಾಲಿಕೆ ಆಯುಕ್ತ ಡಾ.ಅವಿನಾಶ್ ಧಾಕ್ನೆ ಭೇಟಿ ನೀಡಿ ಸ್ಥಿತಿಗತಿ ಪರಿಶೀಲಿಸಿದರು. ಪ್ರಸ್ತುತ ಮುಂಬೈ ಅಗ್ನಿಶಾಮಕ ದಳ, ಮುಂಬೈ ಪೊಲೀಸ್ ಹಾಗೂ ಎನ್‌ಡಿಆರ್‌ಎಫ್ ಸಿಬ್ಬಂದಿ ಜಂಟಿಯಾಗಿ ರಕ್ಷಣಾ ಕಾರ್ಯಾಚರಣೆ ನಡೆಸುತ್ತಿದ್ದಾರೆ.

<><><><>

ಅಮೆರಿಕದ ಸೆಂಟ್ ಲೂಯಿಸ್‌ನಲ್ಲಿ ನಡೆಯುತ್ತಿರುವ ಸಿಂಕ್‌ಫೀಲ್ಡ್ ಕಪ್ ಚೆಸ್ ಟೂರ್ನಿಯ ಎರಡನೇ ಸುತ್ತಿನಲ್ಲಿ ಭಾರತದ ಯುವ ಗ್ರಾಂಡ್‌ಮಾಸ್ಟರ್ ಆರ್. ಪ್ರಜ್ಞಾನಂದ, ಉಜ್ಬೇಕಿಸ್ತಾನದ ಜವೋಕಿರ್ ಸಿಂದಾರೊವ್ ವಿರುದ್ಧ ಭರ್ಜರಿ ಗೆಲುವು ಸಾಧಿಸಿದ್ದಾರೆ. ಇದು ಗ್ರ್ಯಾಂಡ್ ಚೆಸ್ ಟೂರ್‌ನ ಪ್ರಮುಖ ಪಂದ್ಯಾವಳಿಯಲ್ಲಿ ಪ್ರಜ್ಞಾನಂದ ಅವರಿಗೆ ಒಲಿದ ಮೊದಲ ಜಯವಾಗಿದೆ. ೬೫ ನಡೆಗಳ ಕಾಲ ನಡೆದ ಸುದೀರ್ಘ ಕಾದಾಟದ ನಂತರ ಪ್ರಜ್ಞಾನಂದ ಜಯದ ನಗೆ ಬೀರಿದರು. ಈ ಗೆಲುವಿನೊಂದಿಗೆ ಅವರು ಎರಡು ಪಂದ್ಯಗಳಿಂದ ಒಟ್ಟು ೧.೫ ಅಂಕ ಕಲೆಹಾಕಿದ್ದಾರೆ.

<><><><>

ಟೊರಂಟೊದಲ್ಲಿ ನಡೆಯುತ್ತಿರುವ ಮಹಿಳಾ ವಿಭಾಗದ ಕೆನಡಿಯನ್ ಓಪನ್ ಟೆನ್ನಿಸ್ ಟೂರ್ನಿಯಲ್ಲಿ ಕಜಕಿಸ್ತಾನದ ಎಲಿನಾ ರೈಬಾಕಿನಾ ಮತ್ತು ಅಮೆರಿಕಾದ ಕೊಕೊ ಗೌಫ್ ಸೆಮಿಫೈನಲ್ಸ್ ಪ್ರವೇಶಿಸಿದ್ದಾರೆ. ಇಂದು ಬೆಳಗ್ಗೆ ನಡೆದ ಕ್ವಾರ್ಟರ್ ಫೈನಲ್ಸ್ ಪಂದ್ಯಗಳಲ್ಲಿ ರೈಬಾಕಿನಾ, ಜಪಾನ್‌ನ ನವೋಮಿ ಒಸಾಕ ವಿರುದ್ಧ ೪-೬, ೭-೬, ೬-೪ ಅಂತರದಲ್ಲಿ ಗೆಲುವು ಸಾಧಿಸಿದರೆ, ಅಮೆರಿಕದ ಕೊಕೊ ಗೌಫ್ ತಮ್ಮ ಕ್ವಾರ್ಟರ್ ಫೈನಲ್ ಪಂದ್ಯದಿಂದ ಎದುರಾಳಿ ಹಿಂದೆ ಸರಿದ ಹಿನ್ನೆಲೆ ನೇರವಾಗಿ ಸೆಮಿಫೈನಲ್ಸ್ ಪ್ರವೇಶಿಸಿದರು. ಮಾಂಟ್ರಿಯಲ್‌ನಲ್ಲಿ ನಡೆದ ಪುರುಷರ ವಿಭಾಗದ ಕ್ವಾರ್ಟರ್ ಫೈನಲ್ಸ್ ಪಂದ್ಯದಲ್ಲಿ ಅಮೆರಿಕದ ಲರ್ನರ್ ಟಿಎನ್ ಹಾಗೂ ಅಮೆರಿಕದವರೇ ಆದ ಬೆನ್‌ಶೆಲ್ಟನ್ ಸೆಮಿಫೈನಲ್ಸ್ ಪ್ರವೇಶಿಸಿದರು.

<><> ಇಲ್ಲಿಗೆ ವಾರ್ತಾ ಪ್ರಸಾರ ಮುಕ್ತಾಯವಾಯಿತು <><>